**All India Radio: Bangalore**
**National Bulletin In Kannada**
**07.05.2025 / 7.35 am**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**07.05.2025 / 7.35 am**

**<><*<><>*><>**

ಮುಖ್ಯಾಂಶಗಳು

**೧. ಪಾಕಿಸ್ತಾನ ಉಗ್ರರ ನೆಲೆಗಳ ಮೇಲೆ ಸೇನಾ ದಾಳಿ ಆರಂಭ; ಭಾರತೀಯ ಸೇನೆಯಿಂದ ಅಪರೇಷನ್ ಸಿಂಧೂರ**

**೨. ಯುದ್ಧ ಸನ್ನದ್ಧತೆಯ ಭಾಗವಾಗಿ ದೇಶಾದ್ಯಂತ ಹಲವಡೆ ಸ್ವರಕ್ಷಣೆ ತಾಲೀಮು**

**೩. ದೇಶದ ನೀರನ್ನು ದೇಶದ  ಪ್ರಗತಿಗೆ ಬಳಸಲು ಪ್ರಧಾನಿ ನರೇಂದ್ರ ಮೋದಿ ಕರೆ**

**೪. ದೆಹಲಿಯಲ್ಲಿ ಜಾಗತಿಕ ಬಾಹ್ಯಾಕಾಶ ಪರಿಶೋಧನಾ ಸಮ್ಮೇಳನಕ್ಕೆ ಇಂದು ಚಾಲನೆ**

**೫. ಐಪಿಎಲ್ - ಮುಂಬಯಿ ಇಂಡಿಯನ್ಸ್ ವಿರುದ್ಧ ಗುಜರಾತ್ ಟೈಟನ್ಸ್ ಗೆ ೩ ವಿಕೆಟ್ ರೋಚಕ ಗೆಲುವು**

**<><*<><>*><>**

ಭಾರತೀಯ ಸಶಸ್ತ್ರ ಪಡೆಗಳು ಮಧ್ಯರಾತ್ರಿಯ ನಂತರ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದ ಭಯೋತ್ಪಾದಕ ಮೂಲಸೌಕರ್ಯಗಳ ಮೇಲೆ ದಾಳಿ ನಡೆಸಿವೆ. ಒಟ್ಟು ಒಂಬತ್ತು ತಾಣಗಳನ್ನು ಗುರಿಯಾಗಿಸಿ ದಾಳಿ ಮಾಡಲಾಗಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ತನ್ನ ಕ್ರಮಗಳು ಕೇಂದ್ರೀಕೃತವಾಗಿವೆ ಎಂದು ಸಚಿವಾಲಯ ಹೇಳಿದೆ. ಪ್ರಧಾನಿ ನರೇಂದ್ರ ಮೋದಿ ಅವರು ರಾತ್ರಿಯಿಡೀ ಆಪರೇಷನ್ ಸಿಂಧೂರವನ್ನು ನಿರಂತರವಾಗಿ ಮೇಲ್ವಿಚಾರಣೆ ಮಾಡಿದರು.ಇದೇ ವೇಳೆ ಪಾಕಿಸ್ತಾನದ ಯಾವುದೇ ಮಿಲಿಟರಿ ಸೌಲಭ್ಯಗಳನ್ನು ಗುರಿಯಾಗಿಸಲಾಗಿಲ್ಲ. ಗುರಿಗಳ ಆಯ್ಕೆ ಮತ್ತು ಕಾರ್ಯಗತಗೊಳಿಸುವ ವಿಧಾನದಲ್ಲಿ ಭಾರತವು ಸಾಕಷ್ಟು ಸಂಯಮವನ್ನು ಪ್ರದರ್ಶಿಸಿದೆ ಎಂದು ಸಚಿವಾಲಯ ತಿಳಿಸಿದೆ. ಪಹಲ್ಗಾಮ್ ಭಯೋತ್ಪಾದಕ ದಾಳಿಯಲ್ಲಿ ೨೫ ಭಾರತೀಯರು ಮತ್ತು ಒಬ್ಬ ನೇಪಾಳಿ ಪ್ರಜೆ ಸಾವನ್ನಪ್ಪಿದ ಹಿನ್ನೆಲೆಯಲ್ಲಿ ಈ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಈ ದಾಳಿಗೆ ಕಾರಣರಾದವರನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂಬ ಬದ್ಧತೆಗೆ ಸಶಸ್ತ್ರ ಪಡೆಗಳು ಬದ್ಧವಾಗಿವೆ ಎಂದು ಸಚಿವಾಲಯ ಹೇಳಿದೆ.

**<><*<><>*><>**

ಗಡಿ ರಾಜ್ಯ ಪಂಜಾಬ್ ಇಂದು ನಾಗರಿಕ ರಕ್ಷಣಾ ಅಣಕು ಕವಾಯಿತು ನಡೆಸಲು ಸಜ್ಜಾಗಿದೆ. ಗಡಿ ಜಿಲ್ಲೆಗಳಾದ ಅಮೃತಸರ, ಫಿರೋಜ್ಪುರ, ಗುರುದಾಸ್ಪುರ, ಪಠಾಣ್ ಕೋಟ್ ಮತ್ತು ತಾರ್ನ್ ತರಣ್ ಸೇರಿದಂತೆ ರಾಜ್ಯದ ೨೦ ಜಿಲ್ಲೆಗಳಲ್ಲಿ ಇದನ್ನು ನಡೆಸಲಾಗುವುದು. ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು ಮತ್ತು ಯಾವುದೇ ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಅಗತ್ಯ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳುವುದು ಕವಾಯಿತ್ ನ ಉದ್ದೇಶವಾಗಿದೆ. ಯಾವುದೇ ಬೆದರಿಕೆಯ ಹಿನ್ನೆಲೆಯಲ್ಲಿ ವಿವಿಧ ಇಲಾಖೆಗಳ ನಡುವಿನ ಸನ್ನದ್ಧತೆ ಮತ್ತು ಸಮನ್ವಯವನ್ನು ಮೌಲ್ಯಮಾಪನ ಮಾಡುವ ತಾಲೀಮು ಆಗಿರುವುದರಿಂದ ಭಯಪಡುವ ಅಗತ್ಯವಿಲ್ಲ ಎಂದು ಜಿಲ್ಲಾಧಿಕಾರಿಗಳು ಸಾರ್ವಜನಿಕರಿಗೆ ತಿಳಿಸಿದ್ದಾರೆ. ಈ ಮಧ್ಯೆ, ಗುಜರಾತ್ ನ ೧೮ ಜಿಲ್ಲೆಗಳಲ್ಲಿ ಇಂದು ನಾಗರಿಕ ರಕ್ಷಣಾ ಅಣಕು ತಾಲೀಮು  ನಡೆಯಲಿದೆ. ವಡೋದರಾ, ಸೂರತ್, ತಾಪಿ, ಪಟಾನ್, ಬನಸ್ಕಾಂತ, ಅಹಮದಾಬಾದ್, ದ್ವಾರಕಾ, ಕಚ್, ಭರೂಚ್ ಮುಂತಾದ ಸ್ಥಳಗಳಲ್ಲಿ ನಡೆಯಲಿದೆ ಎಂದು ಗೃಹ ಖಾತೆ ರಾಜ್ಯ ಸಚಿವ ಹರ್ಷ್ ಸಾಂಘ್ವಿ ತಿಳಿಸಿದ್ದಾರೆ. ಜಿಲ್ಲಾಡಳಿತಗಳಿಗೆ ಅಣಕು ಕವಾಯತು ಸಂಜೆ ೪ ಗಂಟೆಗೆ ಸೈರನ್ ಶಬ್ದಗಳೊಂದಿಗೆ

ಪ್ರಾರಂಭವಾಗುತ್ತದೆ, ನಂತರ ಸಂಜೆ ೭.೩೦ ರಿಂದ ರಾತ್ರಿ ೮ ರವರೆಗೆ ಬ್ಲ್ಯಾಕೌಟ್ ಡ್ರಿಲ್ ನಡೆಯಲಿದೆ ಎಂದು ಅವರು ಹೇಳಿದ್ದಾರೆ.

**<><*<><>*><>**

ಕೇಂದ್ರ ಗೃಹ ಇಲಾಖೆ, ದೇಶದ್ಯಾಂತ ಇಂದು ನಾಗರಿಕರಿಗೆ ರಕ್ಷಣಾ ಅಣಕು ಕವಾಯತು ಏರ್ಪಡಿಸಿದೆ.

ಕರ್ನಾಟಕದ ಬೆಂಗಳೂರು ಮತ್ತು ರಾಯಚೂರು ಸೇರಿದಂತೆ ದೇಶದ ೨೪೪ ಜಿಲ್ಲೆಗಳಲ್ಲಿ ಇಂದು ರಕ್ಷಣಾ ಅಣಕು ಕವಾಯತು ನಡಯಲಿದೆ.

**<><*<><>*><>**

ಭಾರತದ ನೀರು ಭಾರತದ ಪ್ರಯೋಜನಕ್ಕಾಗಿ ಹರಿಯುತ್ತದೆ, ಅದನ್ನು ಭಾರತದ ಪ್ರಯೋಜನಕ್ಕಾಗಿ ಸಂರಕ್ಷಿಸಲಾಗುವುದು ಮತ್ತು ಅದನ್ನು ಭಾರತದ ಪ್ರಗತಿಗೆ ಬಳಸಲಾಗುವುದು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ದೆಹಲಿಯಲ್ಲಿ ನಿನ್ನೆ ಖಾಸಗಿ ಟಿವಿ ಚಾನೆಲ್ ನ ಸಮಾವೇಶದಲ್ಲಿ ಮಾತನಾಡಿದ ಪ್ರಧಾನಿ, ಭಾರತದ ನ್ಯಾಯಯುತ ಪಾಲಿನ ನೀರು ತನ್ನ ಗಡಿಗಳನ್ನು ಮೀರಿ ಹರಿಯುವ ಹಿಂದಿನ ಸನ್ನಿವೇಶವನ್ನು ಒತ್ತಿ ಹೇಳಿದರು. ಈಗ ಭಾರತದ ನೀರು ರಾಷ್ಟ್ರದೊಳಗೆ ಉಳಿಯುತ್ತದೆ, ದೇಶದ ಅಭಿವೃದ್ಧಿಗೆ ಅದರ ಸರಿಯಾದ ಉದ್ದೇಶವನ್ನು ಪೂರೈಸುತ್ತದೆ ಎಂದು ಪ್ರಧಾನಿ ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೧೫ ಸೆಕೆಂಡ್ಸ್)**

ತಮ್ಮ ಸರ್ಕಾರ ಕೈಗೊಂಡಿರುವ ನದಿಗಳ ಜೋಡಣೆಯ ಮಹತ್ವದ ಕಾರ್ಯದ ಬಗ್ಗೆ ಮಾತನಾಡಿದ ಅವರು, ದಶಕಗಳಿಂದ ನದಿ ನೀರನ್ನು ರಾಜ್ಯಗಳ ನಡುವಿನ ವಿವಾದಗಳಿಗೆ ಕಾರಣವಾಗಿ ಬಳಸಲಾಗುತ್ತಿತ್ತು . ಈ ಸಂಬಂಧ ಕೆನ್-ಬೆಟ್ವಾ ಲಿಂಕ್ ಯೋಜನೆ ಮತ್ತು ಪಾರ್ವತಿ-ಕಾಳಿಸಿಂಧ್-ಚಂಬಲ್ ಲಿಂಕ್ ಯೋಜನೆಯಂತಹ ಪ್ರಮುಖ ಯೋಜನೆಗಳನ್ನು ಉಲ್ಲೇಖಿಸಿದ ಅವರು, ಈ ಉಪಕ್ರಮಗಳು ನೀರಿನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವ ಮೂಲಕ ಲಕ್ಷಾಂತರ ರೈತರಿಗೆ ಪ್ರಯೋಜನವನ್ನು ನೀಡುತ್ತದೆ ಎಂದು ಒತ್ತಿ ಹೇಳಿದರು. ಈ ಮಧ್ಯೆ,ಭಾರತ ಮತ್ತು ಯುನೈಟೆಡ್ ಕಿಂಗ್ಡಮ್ ನಡುವಿನ ಮುಕ್ತ ವ್ಯಾಪಾರ ಒಪ್ಪಂದವನ್ನು ಶ್ಲಾಘಿಸಿದ ಪ್ರಧಾನಿ, ಈ ಒಪ್ಪಂದವು ಆರ್ಥಿಕ ಚಟುವಟಿಕೆಗಳನ್ನು ಹೆಚ್ಚಿಸುತ್ತದೆ ಮತ್ತು ಭಾರತೀಯ ವ್ಯಾಪಾರ ಮತ್ತು ಎಂಎಸ್‌ಎಂಇಗಳಿಗೆ ಅವಕಾಶಗಳನ್ನು ಸೃಷ್ಟಿಸುತ್ತದೆ ಎಂದು ಹೇಳಿದರು. ಭಾರತವು ಯುಎಇ, ಆಸ್ಟ್ರೇಲಿಯಾ ಮತ್ತು ಮಾರಿಷಸ್ ನೊಂದಿಗೆ ವ್ಯಾಪಾರ ಒಪ್ಪಂದಗಳಿಗೆ ಸಹಿ ಹಾಕಿದೆ ಎಂದು ಪ್ರಧಾನಿ ಹೇಳಿದರು.

**<><*<><>*><>**

ಜಾಗತಿಕ ಬಾಹ್ಯಾಕಾಶ ಪರಿಶೋಧನಾ ಸಮ್ಮೇಳನ ಜಿಎಲ್‌ಇಎಕ್ಸ್ ನ  ೧೨ ನೇ ಆವೃತ್ತಿ ಇಂದಿನಿಂದ ದೆಹಲಿಯಲ್ಲಿ ಪ್ರಾರಂಭವಾಗಲಿದೆ. "ಹೊಸ ಜಗತ್ತುಗಳನ್ನು ತಲುಪುವುದು: ಬಾಹ್ಯಾಕಾಶ ಅನ್ವೇಷಣೆ ಪುನರುಜ್ಜೀವನ" ಎಂಬ ವಿಷಯದ ಮೂರು ದಿನಗಳ ಜಾಗತಿಕ ಶೃಂಗಸಭೆಯನ್ನು ಬಾಹ್ಯಾಕಾಶ ಮತ್ತು ಪರಮಾಣು ಶಕ್ತಿ ರಾಜ್ಯ ಸಚಿವ ಡಾ.ಜಿತೇಂದ್ರ ಸಿಂಗ್ ಉದ್ಘಾಟಿಸಲಿದ್ದಾರೆ. ಇಂಟರ್ ನ್ಯಾಷನಲ್ ಆಸ್ಟ್ರೋನಾಟಿಕಲ್ ಫೆಡರೇಶನ್, ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ ಇಸ್ರೋ ಮತ್ತು ಆಸ್ಟ್ರೋನಾಟಿಕಲ್ ಸೊಸೈಟಿ ಆಫ್ ಇಂಡಿಯಾ ಜಂಟಿಯಾಗಿ ಆಯೋಜಿಸಿರುವ ಜಿಎಲ್‌ಇಎಕ್ಸ್ ೨೦೨೫ ಜಾಗತಿಕ ಬಾಹ್ಯಾಕಾಶ ಸಮುದಾಯದಲ್ಲಿ ಭಾರತದ ವಿಸ್ತರಿಸುತ್ತಿರುವ ನಾಯಕತ್ವದಲ್ಲಿ ಒಂದು ಮೈಲಿಗಲ್ಲಾಗಿದೆ.

**<><*<><>*><>**

ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಒಳಗೆ ಭಯೋತ್ಪಾದಕ ಶಿಬಿರಗಳ ಮೇಲೆ ಭಾರತ ನಡೆಸಿದ ವೈಮಾನಿಕ ದಾಳಿಯ ಬಗ್ಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಕ್ರಿಯಿಸಿದ್ದಾರೆ. ಉಭಯ ದೇಶಗಳ ಗಡಿಯಲ್ಲಿ ಏನಾದರೂ ಸಂಭವಿಸಲಿದೆ ಎಂದು ಜನರಿಗೆ ತಿಳಿದಿದೆ ಎಂದು ಅವರು ಹೇಳಿದ್ದಾರೆ. ಇದೇ ವೇಳೆ, ಉಭಯ ದೇಶಗಳ ನಡುವಿನ ಉದ್ವಿಗ್ನತೆ ಶೀಘ್ರದಲ್ಲೇ ಕೊನೆಗೊಳ್ಳುತ್ತದೆ ಎಂದು ಆಶಿಸಿದ್ದಾರೆ. ಏತನ್ಮಧ್ಯೆ, ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರುಬಿಯೊ ಅವರು ಭಾರತ ಮತ್ತು ಪಾಕಿಸ್ತಾನದ ನಡುವಿನ ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಗಮನಿಸಲಾಗುತ್ತಿದೆ ಎಂದು ಹೇಳಿದ್ದಾರೆ.

<><*<><>*><>

ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಜಮ್ಮು ಮತ್ತು ಕಾಶ್ಮೀರದಲ್ಲಿ ಭಾರತೀಯ ಸಶಸ್ತ್ರ ಪಡೆಗಳು ವೈಮಾನಿಕ ದಾಳಿ ನಡೆಸಿದ ನಂತರ ದೇಶದ ಉತ್ತರ ಭಾಗದ ಹಲವಾರು ವಿಮಾನ ನಿಲ್ದಾಣಗಳಲ್ಲಿ ವಾಣಿಜ್ಯ ಕಾರ್ಯಾಚರಣೆಯನ್ನು ಸ್ಥಗಿತಗೊಳಿಸಲಾಗಿದೆ. ಧರ್ಮಶಾಲಾ, ಲೇಹ್, ಜಮ್ಮು, ಶ್ರೀನಗರ ಮತ್ತು ಅಮೃತಸರ ವಿಮಾನ ನಿಲ್ದಾಣಗಳನ್ನು ಮುಂದಿನ ಸೂಚನೆ ಬರುವವರೆಗೆ ಮುಚ್ಚಲಾಗಿದೆ ಎಂದು ಸ್ಪೈಸ್ ಜೆಟ್ ಸಾಮಾಜಿಕ ಮಾಧ್ಯಮ ಪೋಸ್ಟ್ ನಲ್ಲಿ ಹೇಳಿಕೊಂಡಿದೆ. ಈ ವಿಮಾನ ನಿಲ್ದಾಣಗಳಿಂದ ವಿಮಾನ ಸಂಚಾರದ ಸ್ಥಿತಿಗತಿಯನ್ನು ಪರಿಶೀಲಿಸಲು ಇಂಡಿಗೊ ತನ್ನ ಪ್ರಯಾಣಿಕರಿಗೆ ಸಲಹೆ ನೀಡಿದೆ. ಇದಲ್ಲದೆ, ಏರ್ ಇಂಡಿಯಾ ಜಮ್ಮು, ಶ್ರೀನಗರ, ಲೇಹ್, ಜೋಧಪುರ, ಅಮೃತಸರ, ಭುಜ್, ಜಾಮ್ನಗರ್, ಚಂಡೀಗಢ ಮತ್ತು ರಾಜ್ಕೋಟ್ ನಿಂದ ತನ್ನ ಎಲ್ಲಾ ವಿಮಾನ ಕಾರ್ಯಾಚರಣೆಗಳನ್ನು ಇಂದು ಮಧ್ಯಾಹ್ನ ೧೨ ಗಂಟೆಯವರೆಗೆ ರದ್ದುಗೊಳಿಸಿದೆ. ಹೆಚ್ಚಿನ ವಾಣಿಜ್ಯ ವಿಮಾನ ಕಂಪನಿಗಳು ಪ್ರಯಾಣವನ್ನು ಪ್ರಾರಂಭಿಸುವ ಮೊದಲು ವಿಮಾನ ಸಂಚಾರದ ಸ್ಥಿತಿಯನ್ನು ಪರಿಶೀಲಿಸಲು ತಮ್ಮ ಪ್ರಯಾಣಿಕರಿಗೆ ಸಲಹೆ ನೀಡಿವೆ.

<><*<><>*><>

ಭಾರತೀಯ ವಾಯುಪಡೆಯು ಇಂದಿನಿಂದ ಪಾಕಿಸ್ತಾನದೊಂದಿಗಿನ ಅಂತಾರಾಷ್ಟ್ರೀಯ ಗಡಿಯುದ್ದಕ್ಕೂ ರಾಜಸ್ಥಾನದಲ್ಲಿ ಎರಡು ದಿನಗಳ ಮೆಗಾ ಮಿಲಿಟರಿ ತಾಲೀಮನ್ನು ನಡೆಸಲಿದೆ. ರಫೇಲ್, ಸುಖೋಯ್ -೩೦ ಮತ್ತು ಜಾಗ್ವಾರ್ ವಿಮಾನಗಳು ಸೇರಿದಂತೆ ಎಲ್ಲಾ ಮುಂಚೂಣಿ ಫೈಟರ್ ಜೆಟ್ ಗಳನ್ನು ಒಳಗೊಂಡಿರುವ ಪೂರ್ವ ಯೋಜಿತ ವಾಡಿಕೆಯ ತರಬೇತಿ ಕವಾಯತು ಎಂದು ಐಎಎಫ್ ಹೇಳಿದೆ. ಈ ತಾಲೀಮು ಇಂದು ಮಧ್ಯಾಹ್ನ ೩:೩೦ ಕ್ಕೆ ಪ್ರಾರಂಭವಾಗಲಿದೆ ಮತ್ತು ನಾಳೆ ರಾತ್ರಿ ೯:೩೦ ರವರೆಗೆ ಮುಂದುವರಿಯುತ್ತದೆ.

<><*<><>*><>

ಮುಂಬೈನ ವಾಂಖೆಡೆ ಸ್ಟೇಡಿಯಂನಲ್ಲಿ ಕಳೆದ ರಾತ್ರಿ ನಡೆದ  ಮಳೆ ಬಾಧಿತ ಐಪಿಎಲ್ ಪಂದ್ಯದಲ್ಲಿ ಮುಂಬೈ ಇಂಡಿಯನ್ಸ್ ವಿರುದ್ಧ ಗುಜರಾತ್ ಟೈಟಾನ್ಸ್ ಡಿಎಲ್ ಎಸ್ ಅನ್ವಯ ೩ ವಿಕೆಟ್ ಗಳ ಭರ್ಜರಿ ಜಯ ಸಾಧಿಸಿದೆ. ಈ ಗೆಲುವಿನೊಂದಿಗೆ ಗುಜರಾತ್ ಟೈಟನ್ಸ್ ೧೬ ಅಂಕಗಳೊಂದಿಗೆ ಅಂಕಪಟ್ಟಿಯಲ್ಲಿ ಅಗ್ರಸ್ಥಾನಕ್ಕೆ ಜಿಗಿದಿದೆ. ಮುಂಬಯಿ ತಂಡ ನಾಲ್ಕನೇ ಸ್ಥಾನಕ್ಕೆ ಕುಸಿದಿದೆ. ಟಾಸ್ ಸೋತು ಮೊದಲು ಬ್ಯಾಟ್ ಮಾಡಿದ ಮುಂಬೈ ನಿಗದಿತ ೨೦ ಓವರ್ ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೫೫ ರನ್ ಗಳಿಸಿತು. ವಿಲ್ ಜಾಕ್ಸ್ ೫೩ ರನ್ ಗಳಿಸಿದರೆ, ಸೂರ್ಯಕುಮಾರ್ ಯಾದವ್ ೩೫ ರನ್ ಗಳಿಸಿದರು. ಗುಜರಾತ್  ಪರ ಸಾಯಿ ಕಿಶೋರ್ ೨ ವಿಕೆಟ್ ಪಡೆದರು. ಬಳಿಕ ಮಳೆಯಿಂದಾಗಿ ೧೯ ಓವರ್ ಗಳಲ್ಲಿ ೧೪೭ ರನ್ ಗಳ ಪರಿಷ್ಕೃತ ಗುರಿ ಪಡೆದ ಗುಜರಾತ್ ಟೈಟನ್ಸ್ ಕೊನೆಯ ಎಸೆತದಲ್ಲಿ ಗೆಲುವಿನ ನಗೆ ಬೀರಿತು. ನಾಯಕ ಶುಬ್ಮನ್ ಗಿಲ್ ೪೬ ಎಸೆತಗಳಲ್ಲಿ ೪೩ ರನ್ ಗಳಿಸಿ ತಂಡದ ಪರ ಗರಿಷ್ಠ ರನ್ ಗಳಿಸಿದರು. ಇದಕ್ಕಾಗಿ ಅವರು ಪಂದ್ಯಶ್ರೇಷ್ಠ ಗೌರವಕ್ಕೆ ಭಾಜನರಾದರು. ಮುಂಬೈ ಪರ ಟ್ರೆಂಟ್ ಬೌಲ್ಟ್, ಜಸ್ ಪ್ರಿತ್ ಬುಮ್ರಾ ಹಾಗೂ ಅಶ್ವನಿ ಕುಮಾರ್ ತಲಾ ೨ ವಿಕೆಟ್ ಪಡೆದರು. ಕೋಲ್ಕತ್ತಾದ ಈಡನ್ ಗಾರ್ಡನ್ಸ್ ಮೈದಾನದಲ್ಲಿ ಇಂದು ಚೆನ್ನೈ ಸೂಪರ್ ಕಿಂಗ್ಸ್ ಹಾಗೂ ಕೋಲ್ಕತಾ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ <>*><>**